ಕರ್ನಾಟಕ ಸರ್ಕಾರ

ಎಲ್‌ಎನ್:(ಎಸ್‌ಎವೈ)ಎಸ್‌ಆರ್:229/07–08

ಜಿಲ್ಲಾಧಿಕಾರಿಗಳ ಕಾರ್ಯಾಲಯ,
ಬೆಂಗಳೂರು ಜಿಲ್ಲೆ,
ಬೆಂಗಳೂರು, ದಿನಾಂಕ:12–1–2009.

## ಅಧಿಕೃತ ಜ್ಞಾಪನ

ವಿಷಯ:– ಬೆಂಗಳೂರು ಜಿಲ್ಲೆ, ಬೆಂಗಳೂರು ಉತ್ತರ (ಅಪರ) ತಾಲ್ಲೂಕು, ಯಲಹಂಕ ಹೋಬಳಿ, ಚೊಕ್ಕನಹಳ್ಳಿ ಗ್ರಾಮದ ಸರ್ವೆ ನಂ. 57 ರಲ್ಲಿ 0–25 ಗುಂಟೆ 58 ರಲ್ಲಿ 4–00 ಎಕರೆ 61 ರಲ್ಲಿ 5–00 ಎಕರೆ ಒಟ್ಟು 9–25 ಎಕರೆ/ಗುಂಟೆ ವಿಸ್ತೀರ್ಣದ ವ್ಯವಸಾಯದ ಜಮೀನನ್ನು ವ್ಯವಸಾಯೇತರ ವಾಸದ ಉದ್ದೇಶಕ್ಕೆ ಭೂ ಪರಿವರ್ತನೆ ಕೋರಿ ಶ್ರೀ.ಆರ್.ರಾಧಕೃಷ್ಣರಾವ್ ಬಿನ್ ಲೇಟ್ ಸಿ.ರಾಮರಾವ್, ಶ್ರೀ.ವಿಜಯರಾಜ ಎಸ್ಟೇಟ್, ಚೊಕ್ಕನಹಳ್ಳಿ, ಜಕ್ಕೂರು ಅಂಚೆ, ಬೆಂಗಳೂರು–64 ರವರು ಸಲ್ಲಿಸಿರುವ ಅರ್ಜಿ ದಿನಾಂಕ:10–12–2007

ಉಲ್ಲೇಖ:–
1) ಸರ್ಕಾರದ ಸುತ್ತೋಲೆ ಸಂಖ್ಯೆ:ಆರ್‌ಡಿ 7 ಎಲ್‌ಜಿಪಿ 95 ದಿನಾಂಕ: 7–6–1999.
2) ಸರ್ಕಾರದ ಸುತ್ತೋಲೆ ಸಂಖ್ಯೆ:ಆರ್.ಡಿ:56:ಎಲ್‌ಜಿಪಿ 2008 ದಿನಾಂಕ:10–9–2008 ಮತ್ತು 24–9–2008.
3) ತಹಶೀಲ್ದಾರ್,ಬೆಂಗಳೂರು ಉತ್ತರ (ಅಪರ) ತಾಲ್ಲೂಕು, ರವರ ವರದಿ ಸಂಖ್ಯೆ ಎಎಲ್‌ಎನ್:ಎಸ್.ಆರ್:508/07–08 ದಿನಾಂಕ : 13–12–2007.
4) ಭೂ ಪರಿವರ್ತನಾ ಶುಲ್ಕ ರೂ.5,24,081–00 ಹಾಗೂ ಪೋಡಿ ಶುಲ್ಕ ಮತ್ತು ಅನಧಿಕೃತ ಕಟ್ಟಡಕ್ಕೆ ದಂಡ ಶುಲ್ಕ ಚ.ಅ. ಒಂದಕ್ಕೆ ರೂ.11.50 ರಂತೆ 2367 ಚ.ಅಡಿಗೆ ರೂ. 27,221–00 ಒಟ್ಟು ರೂ.5,51,467–00 ಗಳನ್ನು ಚಲನ್ ನಂಬರ್.10 ದಿ:12–3–2008 ಎಸ್.ಬಿ.ಎಂ.ಗೆ ಅರ್ಜಿದಾರರು ಜಮಾ ಮಾಡಿರುತ್ತಾರೆ.
5) ಏಕಗವಾಕ್ಷಿ ಸಮಿತಿ ಸಭೆಯ ನಡವಳಿ ದಿನಾಂಕ:5–2–2008

:: 0 ::

ಕರ್ನಾಟಕ ಭೂ ಕಂದಾಯ ಅಧಿನಿಯಮ 1964 ರ ಕಲಂ 95(2), 95(4) ಮತ್ತು 95(7) ರ ಷರತ್ತುಗಳು, ಹಾಗೂ ಷರತ್ತುಗಳಿಗೊಳಪಡಿಸಿ ಕರ್ನಾಟಕ ಭೂ ಕಂದಾಯ (ತಿದ್ದುಪಡಿ) ನಿಯಮಗಳು 1994 ರ ನಿಯಮ 107(1) ರಂತೆ ಎಕರೆ ಒಂದಕ್ಕೆ ರೂ.54,450–00 (ರೂಪಾಯಿಗಳು ಐವತ್ತು ನಾಲ್ಕು ಸಾವಿರದ ನಾಲ್ಕು ನೂರ ಐವತ್ತು ಮಾತ್ರ ) ಗಳಂತೆ ಅರ್ಜಿದಾರರು ಉಲ್ಲೇಖ(4)ರಲ್ಲಿ ನಮೂದಿಸಿರುವಂತೆ ಹಣವನ್ನು ಜಮಾ ಮಾಡಿದ ಮೇರೆಗೆ ಅರ್ಜಿದಾರರಾದ ಶ್ರೀ.ಆರ್.ರಾಧಕೃಷ್ಣರಾವ್ ಬಿನ್ ಲೇಟ್ ಸಿ.ರಾಮರಾವ್, ಶ್ರೀ.ವಿಜಯರಾಜ ಎಸ್ಟೇಟ್, ಚೊಕ್ಕನಹಳ್ಳಿ, ಜಕ್ಕೂರು ಅಂಚೆ, ಬೆಂಗಳೂರು–64 ರವರ ಅರ್ಜಿಯನ್ನು ಪರಿಗಣಿಸಿ, ಬೆಂಗಳೂರು ಉತ್ತರ (ಅಪರ) ತಾಲ್ಲೂಕು, ಯಲಹಂಕ ಹೋಬಳಿ, ಚೊಕ್ಕನಹಳ್ಳಿ ಗ್ರಾಮದ ಸರ್ವೆ ನಂ. 57 ರಲ್ಲಿ 0–25 ಗುಂಟೆ 58 ರಲ್ಲಿ 4–00 ಎಕರೆ 61 ರಲ್ಲಿ 5–00 ಎಕರೆ ಒಟ್ಟು 9–25 ಎಕರೆ/ಗುಂಟೆ ವಿಸ್ತೀರ್ಣದ ವ್ಯವಸಾಯದ ಜಮೀನನ್ನು ವ್ಯವಸಾಯೇತರ ವಾಸದ ಉದ್ದೇಶಕ್ಕೆ ಬಳಸಲು ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಭೂ ಪರಿವರ್ತನಾ ಆದೇಶವನ್ನು ಹೊರಡಿಸಲಾಗಿದೆ.

1. ಈ ಭೂಮಿಯು ಯಾವ ಉದ್ದೇಶಕ್ಕಾಗಿ ಪರಿವರ್ತನೆಯಾಗಿದೆಯೋ ಆ ಉದ್ದೇಶಕ್ಕಾಗಿ ಉಪಯೋಗಿಸಿಕೊಳ್ಳಲು ಸಕ್ಷಮ ಪ್ರಾಧಿಕಾರದಿಂದ ಅಂದರೆ, **ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ)/ಬಿ.ಎಂ.ಆರ್.ಡಿ.ಎ.(ಸ್ಥಳೀಯ ಯೋಜನಾ ಪ್ರಾಧಿಕಾರ/ ಬಿ.ಎಂ.ಐ.ಸಿ.ಎ.ಪಿ.ಎ/ ಮಾಲಿನ್ಯ ನಿಯಂತ್ರಣಾ ಮಂಡಳಿ** ರವರಿಂದ ಮಂಜೂರಾತಿಯನ್ನು ಪಡೆಯದ ಹೊರತು ಈ ಆದೇಶವು ಅನುಭವದಾರನಿಗೆ ಯಾವುದೇ ಹಕ್ಕನ್ನು ನೀಡುವುದಿಲ್ಲ.

2. ಈ ಭೂ ಪರಿವರ್ತಿತ ಜಮೀನನ್ನು **ವಾಸದ** ಉದ್ದೇಶಕ್ಕಾಗಿ ಮಾತ್ರ ಉಪಯೋಗಿಸಿಕೊಳ್ಳತಕ್ಕದ್ದು. ಈ ಜಮೀನನ್ನು ಪೂರ್ವಾನುಮತಿ ಇಲ್ಲದೇ ಬೇರೆ ಉದ್ದೇಶಕ್ಕಾಗಿ ಉಪಯೋಗಿಸಿಕೊಳ್ಳಬಾರದು

3. ಈ ಜಮೀನಿನಲ್ಲಿ ಉದ್ದೇಶಿಸಿರುವ ಬಡಾವಣೆ ನಕ್ಷೆ ಹಾಗೂ ಪರವಾನಗಿ ಇತ್ಯಾದಿಗಳನ್ನು **ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ/ಬಿ.ಎಂ.ಆರ್.ಡಿ.ಎ.(ಸ್ಥಳೀಯ ಯೋಜನಾ ಪ್ರಾಧಿಕಾರ/ ಬಿ.ಎಂ.ಐ.ಸಿ.ಎ.ಪಿ.ಎ/ ಪ್ರಾಧಿಕಾರದಿಂದ** ಅನುಮೋದಿಸಿಕೊಂಡು ಆ ನಂತರ ಅನುಮೋದನೆಗೊಂಡ ನಕ್ಷೆಗೆ ಅನುಗುಣವಾಗಿ ಕಟ್ಟಡವನ್ನು ಕಟ್ಟುವುದು. ಸದರಿ ಜಮೀನಿನಲ್ಲಿ ಲೇಔಟ್/ ಕಟ್ಟಡ ನಕ್ಷೆಗೆ ಅನುಮೋದನೆ ಪಡೆಯದೆ ಪರಭಾರೆ ಮಾಡಕೂಡದು.

---2.

4. ಇತರೆ ಅವಶ್ಯವಾದ ರಸ್ತೆ ಜಾಗ, ರಸ್ತೆ ಮಾರ್ಜಿನ್, ಉದ್ಯಾನವನ, ಸಿ.ಎ ನಿವೇಶನ ಖಾಲಿ ಜಾ... **ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ/ಬಿ.ಎಂ.ಆರ್.ಡಿ.ಎ.(ಸ್ಥಳೀಯ ಯೋಜನಾ ಪ್ರಾಧಿಕಾರ)/ ಬಿ.ಎ... ಪ್ರಾಧಿಕಾರದಿಂದ** ಅನುಮೋದಿಸಿದ ಬಡಾವಣೆ ನಕ್ಷೆ ಪ್ರಕಾರ ಹಾಗೂ ನಿರ್ದಿಷ್ಟಪಡಿಸಿದ ನಿಯಮಗಳ... ಉದ್ದೇಶಕ್ಕಾಗಿ ಕಾಯ್ದಿರಿಸತಕ್ಕದ್ದು.

5. **ಸಂಬಂಧಪಟ್ಟ ಪ್ರಾಧಿಕಾರದಿಂದ ಅನುಮೋದಿತ ನಕ್ಷೆ ಪಡೆಯದೆ ನಿವೇಶನಗಳನ್ನು... ನೋಂದಣಾಧಿಕಾರಿಗಳಿಂದ ಉಪನೊಂದಣಾಧಿಕಾರಿಗಳಿಂದ ನೋಂದಾವಣೆ ಮಾಡತಕ್ಕದ್ದಲ್ಲ, ಖಾತೆದಾರರು ಬ... ಭೂ ಪರಿವರ್ತನೆ ಮಂಜೂರು ಮಾಡಿರುವ ಜಮೀನಿನ ಪೂರ್ಣ ವಿಸ್ತೀರ್ಣವನ್ನು ಮಾರಾಟ ಮಾಡಲು ಉ... ಆದೇಶದ ಅಡ್ಡಿ ಬರುವುದಿಲ್ಲ.**

6. ಸಾರ್ವಜನಿಕ ಹಿತದೃಷ್ಟಿಯಿಂದ ಸದರಿ ಜಮೀನಿನಲ್ಲಿ ನಿವೇಶನದಾರರಿಗೆ ನಾಗರೀಕ ಸೌಲಭ್ಯಗಳಾದ ವಿ... ಕುಡಿಯುವ ನೀರು, ಒಳಚರಂಡಿ ವ್ಯವಸ್ಥೆ ಇತ್ಯಾದಿಗಳನ್ನು ಆರೋಗ್ಯ ನೈರ್ಮಲೀಕರಣ ಹಾಗೂ ಭ... ಉದ್ದೇಶದಿಂದ ಎಲ್ಲಾ ಸೌಲಭ್ಯಗಳನ್ನು ಕಾನೂನು ರೀತ್ಯ ಒದಗಿಸಿಕೊಡುವುದು ಅರ್ಜಿದಾರರ ಜವಾಬ್ದಾರಿಯಾಗಿರು...

7. **ಈ ಜಮೀನಿಗೆ ತಾಕು ಪೋಟ್ ಖರಾಬ್ ಜಮೀನು ಇದ್ದಲ್ಲಿ, ಕರ್ನಾಟಕ ಭೂ ಕಂದಾಯ ಕಾಯಿದೆ 1964 ರ ... 67 ರಂತೆ ಸರ್ಕಾರದ ಉದ್ದೇಶಕ್ಕಾಗಿ ಕಾಯ್ದಿರಿಸತಕ್ಕದ್ದು. ಹಾಗೂ ಸರ್ವೆ ನಂ. 58 ರಲ್ಲಿ 0–01 ಮತ್ತು ಸ.ನಂ. ... ರಲ್ಲಿ 0–0.08 ಗುಂಟೆ ವಿಸ್ತೀರ್ಣ ಬಿ ಖರಾಬಿನಲ್ಲಿ ಬರುವ ಕಾರಣ ಇದನ್ನು ಸಾರ್ವಜನಿಕ ಉದ್ದೇಶಕ್ಕಾ... ಮೀಸಲಿರಿಸಲಾಗಿದೆ. ಈ ವಿಸ್ತೀರ್ಣದ ಮೇಲೆ ಅರ್ಜಿದಾರರಿಗೆ ಯಾವುದೇ ಹಕ್ಕು ಇರುವುದಿಲ್ಲ. ಈ ಬಿ ಖರಾಬಿನ ವಿಸ್ತೀರ್ಣದ ಹಕ್ಕು ಯಾವಾಗಲೂ ಸರ್ಕಾರಕ್ಕೆ ಸೇರಿರುತ್ತದೆ. ತಹಶೀಲ್ದಾರರವರು ಈ ಬಾಬ್ತು ಆರ್.ಟಿ.ಸಿ.ಯಲ್ಲಿ ಸ್ಪಷ್ಟವಾಗಿ ನಮೂದಿಸತಕ್ಕದ್ದು.**

8. ಸರ್ಕಾರದ ಆದೇಶ ಸಂಖ್ಯೆ ಪಿಡಬ್ಲ್ಯೂಡಿ 7556–665 ಆರ್ ಮತ್ತು ಬಿ–6–54–5 ಮತ್ತು ಕೇಂದ್ರ ಸರ್ಕಾರದ ಸಾರಿಗೆ ಇಲಾಖೆಯ ಪತ್ರದ ನಂ. ಪಿ.1/7(11)67, ದಿನಾಂಕ: 01–01–1966 ರಂತೆ ಸರ್ಕಾರವು ಕಾಲಕಾಲಕ್ಕೆ ನೀಡುವ ಆದೇಶದಂತೆ ಈ ಜಮೀನಿನಲ್ಲಿ ಕಟ್ಟಲು ಉದ್ದೇಶಿಸಿರುವ ಕಟ್ಟಡವು ರಾಷ್ಟ್ರೀಯ ಹಾಗೂ ರಾಜ್ಯ ಹೆದ್ದಾರಿಗಳಿಗೆ ಸಂಬಂಧಿಸಿದಂತೆ ರಸ್ತೆಯ ಮಧ್ಯಭಾಗದಿಂದ 40 ಮೀಟರ್‌ಗಳ ಅಂತರವನ್ನು ಮತ್ತು ಜಿಲ್ಲಾ ಹೆದ್ದಾರಿಗೆ ಸಂಬಂಧಿಸಿದಂತೆ ರಸ್ತೆಯ ಮಧ್ಯಭಾಗದಿಂದ 25 ಮೀಟರ್‌ಗಳ ಅಂತರವನ್ನು ಕಾಯ್ದಿರಿಸಬೇಕು ಹಾಗೂ ಈ ಖಾಲಿ ಪ್ರದೇಶದಲ್ಲಿ ಯಾವುದೇ ಕಟ್ಟಡವನ್ನು ಕಟ್ಟಬಾರದು.

9. **ಭೂ ಪರಿವರ್ತನೆ ಮಂಜೂರಿ ಯಾವ ಉದ್ದೇಶಕ್ಕೆ ಆಗಿರುತ್ತದೆಯೋ ಅದೇ ಉದ್ದೇಶಕ್ಕೆ ಈ ದಿನದಿಂದ ಎರಡು ವರ್ಷಗಳ ಒಳಗಾಗಿ ಉಪಯೋಗಿಸತಕ್ಕದ್ದು.**

10. ಈ ಭೂ ಪರಿವರ್ತನಾ ಜಮೀನಿನಲ್ಲಿ **ಸ್ಥಾಪಿಸಲಾಗುವ ಕೈಗಾರಿಕಾ ಘಟಕಗಳು ಹೊರದೂಡುವ ಹೊಗೆ, ಅನಿಲ, ಇತರೆ ಕಲ್ಮಶಗಳನ್ನು ಪರಿಣಾಮಕಾರಿಯಾಗಿ ತಡೆಗಟ್ಟಿ ಸಾರ್ವಜನಿಕರ ಆರೋಗ್ಯಕ್ಕೆ ಯಾವುದೇ ರೀತಿಯ ಹಾನಿಯಾಗದಂತೆ ಹಾಗೂ ಪರಿಸರ ಮಾಲಿನ್ಯವಾಗದಂತೆ ನೋಡಿಕೊಳ್ಳತಕ್ಕದ್ದು.** ಕೈಗಾರಿಕಾ ಉದ್ದೇಶಕ್ಕಾಗಿ ಭೂ ಪರಿವರ್ತಿತ ಜಮೀನಿನಲ್ಲಿ ಸ್ಥಾಪಿಸುವ ಕೈಗಾರಿಕಾ ಘಟಕಗಳು ಕರ್ನಾಟಕ ಮಾಲಿನ್ಯ ನಿಯಂತ್ರಣ ಮಂಡಳಿ ಹಾಗೂ ಪರಿಸರ ಇಲಾಖೆಗೆ ಅನುಮತಿ ಹೊಂದಿರತಕ್ಕದ್ದು.

11. ಈ ಆದೇಶವು ಸದರಿ ಜಮೀನಿಗೆ ಸಂಬಂಧಪಟ್ಟಂತೆ ಯಾವುದೇ ನ್ಯಾಯಾಲಯದಲ್ಲಿನ ದಾವೆ / ರಿಟ್ ಅರ್ಜಿ/ ಮೇಲ್ಮನವಿಯ ತೀರ್ಪಿಗೆ ಒಳಪಟ್ಟಿರುತ್ತದೆ.

12. ಪ್ರಸ್ತಾವಿತ ಜಮೀನಿನ ಬಗ್ಗೆ ಯಾವುದೇ ಭೂಸ್ವಾಧೀನ ಪ್ರಕ್ರಿಯೆಗೆ ಒಳಪಟ್ಟಿದ್ದಲ್ಲಿ ಈ ಪ್ರಾಧಿಕಾರವು ಜವಾಬ್ದಾರಿಯಾಗುವುದಿಲ್ಲ.

13. ಮೇಲ್ಕಂಡ ಯಾವುದೇ ಷರತ್ತುಗಳನ್ನು ಉಲ್ಲಂಘಿಸಿದಲ್ಲಿ ಈ ಭೂ ಪರಿವರ್ತನೆ ಆದೇಶವನ್ನು ಯಾವುದೇ ಸೂಚನೆ ನೀಡದೇ ರದ್ದುಗೊಳಿಸಲಾಗುವುದು ಮತ್ತು ಕರ್ನಾಟಕ ಭೂ ಕಂದಾಯ ಕಾಯಿದೆ 1964 ರ ಕಲಂ 96 ರಂತೆ ದಂಡ ಶುಲ್ಕವನ್ನು ವಿಧಿಸಲು ಮುಂದಿನ ಕ್ರಮ ತೆಗೆದುಕೊಳ್ಳಲಾಗುವುದು. ಅಲ್ಲದೇ ಈ ಜಮೀನಿನಲ್ಲಿ ಅನಧಿಕೃತವಾಗಿ ಕಟ್ಟಿದ ಕಟ್ಟಡಗಳನ್ನು ಯಾವುದೇ ಪರಿಹಾರ ನೀಡದೇ ಕೆಡವಲು ಕ್ರಮ ತೆಗೆದುಕೊಳ್ಳಲಾಗುವುದು. ಹಾಗೂ ಅದಕ್ಕೆ ತಗಲುವ ವೆಚ್ಚವನ್ನು ಭೂ ಕಂದಾಯ ಬಾಕಿ ಎಂದು ಖಾತೇದಾರರಿಂದ ವಸೂಲಿ ಮಾಡಲಾಗುವುದು.

---3.

36

## ಷೆಡ್ಯೂಲ್ ವಿವರ

ಬೆಂಗಳೂರು ಜಿಲ್ಲೆ ಬೆಂಗಳೂರು ಉತ್ತರ (ಅಪರ) ತಾಲ್ಲೂಕು, ಯಲಹಂಕ ಹೋಬಳಿ, ಚೊಕ್ಕನಹಳ್ಳಿ ...ದ ಸರ್ವೆ ನಂ. 57 ರಲ್ಲಿ 0–25 ಗುಂಟೆ 58 ರಲ್ಲಿ 4–00 ಎಕರೆ 61 ರಲ್ಲಿ 5–00 ಎಕರೆ ಒಟ್ಟು 9–25 ...ೆ/ಗುಂಟೆ ವಿಸ್ತೀರ್ಣಕ್ಕೆ ಭೂ ಪರಿವರ್ತಿತ ಜಮೀನಿನ ಚಕ್ಕುಬಂದಿ:

**-: ಚೆಕ್ಕುಬಂದಿ :-**

| ...ರ್ವೆ ನಂ. ವಿಸ್ತೀರ್ಣ ಎಕರೆ/ಗುಂಟೆ | ಪೂರ್ವಕ್ಕೆ | ಪಶ್ಚಿಮಕ್ಕೆ | ಉತ್ತರಕ್ಕೆ | ದಕ್ಷಿಣಕ್ಕೆ |
|---|---|---|---|---|
| 57 ರಲ್ಲಿ 0–25 | ಸ.ನಂ. 57 ರ ಜಮೀನು | ಸ.ನಂ. 58 ರ ಉಳಿಕೆ ಜಮೀನು | ಸ.ನಂ. 59 ರ ಜಮೀನು | ಸ.ನಂ. 62 ರ ಜಮೀನು |
| 58 ರಲ್ಲಿ 4–00 | ಸ.ನಂ. 57 ರ ಜಮೀನು | ಸ.ನಂ. 61 ರ ಜಮೀನು | ಸ.ನಂ. 59 ರ ಜಮೀನು | ಸ.ನಂ. 62 ಮತ್ತು ಇದೇ ಸ.ನಂ. ಉಳಿಕೆ ಜಮೀನು |
| ...ಲ್ಲಿ 5–00 | ಸ.ನಂ. 58 ರ ಜಮೀನು | ಸ.ನಂ. 61 ರ ಜಮೀನು | ಸ.ನಂ. 60 ರ ಜಮೀನು | ಸ.ನಂ. 62 ರ ಜಮೀನು |

(ಹೆಚ್.ರಾಮಾಂಜನೇಯ),
ವಿಶೇಷ ಜಿಲ್ಲಾಧಿಕಾರಿಗಳು,
ಬೆಂಗಳೂರು ಜಿಲ್ಲೆ,ಬೆಂಗಳೂರು.

**ಪ್ರತಿಯನ್ನು ಮುಂದಿನ ಸೂಕ್ತ ಕ್ರಮಕ್ಕಾಗಿ ಕೆಳಕಂಡವರಿಗೆ ಕಳುಹಿಸಲಾಗಿದೆ.**

1) ತಹಶೀಲ್ದಾರರು, ಬೆಂಗಳೂರು ಉತ್ತರ (ಅಪರ) ತಾಲ್ಲೂಕು, ರವರಿಗೆ ಮೂಲ ಕಡತ ಹಾಗೂ ಚಲನ್‌ದೊಂದಿಗೆ ಕಳುಹಿಸುತ್ತಾ ಈ ಆದೇಶದ ಪ್ರಕಾರ ಸಂಬಂಧಪಟ್ಟ ಸರ್ವೆ ನಂ. ಭೂ ಪರಿವರ್ತನೆಯಾಗಿದೆ ಎಂದು ಗಣಿಕೀಕೃತ ಆರ್.ಟಿ.ಸಿ.ಯಲ್ಲಿ ಕೂಡಲೇ ನಮೂದಿಸತಕ್ಕದ್ದು. ಮತ್ತು ಈ ಜಮೀನಿಗೆ ಖಾತೇದಾರರ ಲೆಕ್ಕದಲ್ಲಿ ಸದರಿ ಜಮೀನಿನ ಭೂ ಕಂದಾಯವನ್ನು ಕಡಿತಗೊಳಿಸತಕ್ಕದ್ದು.
2) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು ರವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
3) ಉಪವಿಭಾಗಾಧಿಕಾರಿಗಳು, ಬೆಂಗಳೂರು ಉತ್ತರ ಉಪವಿಭಾಗ, ಬೆಂಗಳೂರು.
4) ಉಪನಿರ್ದೇಶಕರು, ಭೂ ಮಾಪನ ಮತ್ತು ಭೂ ದಾಖಲೆಗಳ ಇಲಾಖೆ, ಬೆಂಗಳೂರು ಉಪವಿಭಾಗ, ಬೆಂಗಳೂರು. ಇವರಿಗೆ ಆರ್.ಟಿ.ಸಿ ಹಾಗೂ ನಕ್ಷೆಯ ಪ್ರತಿಯೊಂದಿಗೆ ಕಳುಹಿಸುತ್ತಾ ಭೂ ಪರಿವರ್ತನಾ ಪೋಡಿ ಕಾರ್ಯವನ್ನು ಜರೂರಾಗಿ ಪೂರೈಸಲು ಸೂಚಿಸಿದೆ.
5) ಉಪ ನೋಂದಣಾಧಿಕಾರಿಗಳು, ಯಲಹಂಕ ಹೋಬಳಿ, ಬೆಂಗಳೂರು ಉತ್ತರ (ಅಪರ) ತಾಲ್ಲೂಕು, ಬೆಂಗಳೂರು ಇವರಿಗೆ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
6) ಅರ್ಜಿದಾರರಾದ ಶ್ರೀ.ಆರ್.ರಾಧಕೃಷ್ಣರಾವ್ ಬಿನ್ ಲೇಟ್ ಸಿ.ರಾಮರಾವ್, ಶ್ರೀ.ವಿಜಯರಾಜ ಎಸ್ಟೇಟ್, ಚೊಕ್ಕನಹಳ್ಳಿ, ಜಕ್ಕೂರು ಅಂಚೆ, ಬೆಂಗಳೂರು–64 ರವರಿಗೆ ದೃಢೀಕೃತ ಅಂಚೆ ಮೂಲಕ ಕಳುಹಿಸಲಾಗಿದೆ.
7) ಹೆಚ್ಚಿನ ಪ್ರತಿ.

ವಿಶೇಷ ಜಿಲ್ಲಾಧಿಕಾರಿಗಳು,
ಬೆಂಗಳೂರು ಜಿಲ್ಲೆ,ಬೆಂಗಳೂರು.

Applied By ...
Applied On 12/2/14
Copy Prepared By
Copy Compared ...
Copy Ready On 12/2/14
Copy Delivered On 12/2/14
C.A.R. No. 26824 15/2/14

"ಛಾಯಪ್ರತಿ"
ಜಿಲ್ಲಾಧಿಕಾರಿಗಳ ಪರವಾಗಿ
ಬೆಂಗಳೂರು ಜಿಲ್ಲೆ